**ಕರ್ನಾಟಕ ಸರ್ಕಾರ**
**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/ವಿಯೋ/19/HFI/2017-18

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:14-02-2018.

# ಸುತ್ತೋಲೆ

ವಿಷಯ: 2015-16ನೇ ಸಾಲಿನ ದ್ವಿತೀಯ ವರ್ಷದ ಪದವಿ ವಿದ್ಯಾರ್ಥಿಗಳಿಗೆ ಕೌಶಲ್ಯ ತರಬೇತಿ ಕಾರ್ಯಕ್ರಮವನ್ನು ಅನುಷ್ಠಾನಗೊಂಡಿರುವ ಬಗ್ಗೆ.

ಉಲ್ಲೇಖ: ಸಂಖ್ಯೆ:ಕಾಶಿಇ/ವಿಯೋ/53/EOI/2015-16, ದಿ:13-1-2016

******

ಸೂಚಿತ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ, 2015-16ನೇ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ **ದ್ವಿತೀಯ ವರ್ಷದ ಪದವಿ ವಿದ್ಯಾರ್ಥಿಗಳಿಗೆ** ಸಾಂಪ್ರದಾಯಿಕ ಪದವಿ ಶಿಕ್ಷಣದ ಜೊತೆಗೆ, Analytical Skill, Entrepreneurial Skill, Soft skills ಇವೇ ಮೊದಲಾದ ಕೌಶಲ್ಯಗಳಲ್ಲಿ ತರಬೇತಿಯನ್ನು ಉಚಿತವಾಗಿ ನೀಡಲು ಕೆಲವು ಸ್ವಯಂ ಸಂಸ್ಥೆಗಳಿಗೆ ವಹಿಸಲಾಗಿತ್ತು.

ಸದರಿ ಸಂಸ್ಥೆಗಳು ತರಬೇತಿಯನ್ನು ಯಶಸ್ವಿಯಾಗಿ ಪೂರೈಸಿರುವ ಬಗ್ಗೆ ಹಾಗೂ ತರಬೇತಿಯು ವಿದ್ಯಾರ್ಥಿಗಳಲ್ಲಿ ಉಂಟು ಮಾಡಿದ ಪರಿಣಾಮಗಳ ಬಗ್ಗೆ ವಿದ್ಯಾರ್ಥಿಗಳಿಂದ ಹಿಮ್ಮಾಹಿತಿ ಪಡೆದಿದ್ದಲ್ಲಿ, ಅವುಗಳನ್ನು ಕ್ರೋಡೀಕರಿಸಿದ ಮಾಹಿತಿಯನ್ನು ತರಬೇತಿ ನೀಡಿದ ಸಂಸ್ಥೆಯ ಹೆಸರು, ತರಬೇತಿ ಪಡೆದ ವಿದ್ಯಾರ್ಥಿಗಳ ಪ್ರಮಾಣ, ತರಬೇತಿ ಅವಧಿ ಮತ್ತು ತರಬೇತಿಯನ್ನು ಪೂರ್ಣಗೊಳಿಸಲಾಗಿದೆಯೇ ಎಂಬ ಮಾಹಿತಿಯೊಂದಿಗೆ 2015-16ನೇ ಸಾಲಿನಲ್ಲಿ **ದ್ವಿತೀಯ ವರ್ಷದ ಪದವಿ ವಿದ್ಯಾರ್ಥಿಗಳಿಗೆ** ಸಾಂಪ್ರದಾಯಿಕ ಪದವಿ ಶಿಕ್ಷಣದ ಜೊತೆಗೆ, Analytical Skill, Entrepreneurial Skill, Soft skills ಇತ್ಯಾದಿ ಕೌಶಲ್ಯಗಳಲ್ಲಿ ತರಬೇತಿಯನ್ನು ನೀಡಲಾದ ಬಗ್ಗೆ ಹಿಮ್ಮಾಹಿತಿ (Feedback)ಯನ್ನು ದಿ:17-02-2018ರೊಳಗಾಗಿ ಸಾಫ್ಟ್ ಪ್ರತಿಗಳಲ್ಲಿ ಕೇಂದ್ರ ಕಛೇರಿಗೆ ಸಲ್ಲಿಸತಕ್ಕದ್ದು.

ಸಾಫ್ಟ್ ಪ್ರತಿ ಕಳುಹಿಸಬೇಕಾದ ವಿಳಾಸ: naipunyanidhi.dce@gmail.com.

ಕಾಲೇಜು ಶಿಕ್ಷಣ ನಿರ್ದೇಶಕರು.
14/2/18

**ಇವರಿಗೆ:**

ಎಲ್ಲಾ 411 ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.

**ಪ್ರತಿಯನ್ನು:**

1) ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು ಧಾರವಾಡ ಮತ್ತು ಕಲುಬುರ್ಗಿ – ಮಾಹಿತಿ ಹಾಗೂ ಮೇಲ್ವಿಚಾರಣೆಗಾಗಿ.
2) ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
3) ಕಛೇರಿ ಪ್ರತಿ.